ಜುಲೈ 2024-2025 ರ ಪರೀಕ್ಷೆ-3
JULY 2024-2025 EXAMINATION-3

[ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 12
[Total No. of Printed Pages : 12

CCE RR/PR/PF

[ಒಟ್ಟು ಪ್ರಶ್ನೆಗಳ ಸಂಖ್ಯೆ : 38
[Total No. of Questions : 38

ಸಂಕೇತ ಸಂಖ್ಯೆ : 85-K **Code No. : 85-K**

ವಿಷಯ : ಸಮಾಜ ವಿಜ್ಞಾನ
Subject : SOCIAL SCIENCE

(ಕನ್ನಡ ಮಾಧ್ಯಮ / Kannada Medium)

(ಶಾಲಾ ಪುನರಾವರ್ತಿತ ಅಭ್ಯರ್ಥಿ / ಖಾಸಗಿ ಪುನರಾವರ್ತಿತ ಅಭ್ಯರ್ಥಿ / ಖಾಸಗಿ ಅಭ್ಯರ್ಥಿ)

(Regular Repeater / Private Repeater / Private Fresh)

ದಿನಾಂಕ : 11. 07. 2025] [Date : 11. 07. 2025

ಸಮಯ : ಬೆಳಗ್ಗೆ 10-00 ರಿಂದ ಮಧ್ಯಾಹ್ನ 1-15 ರವರೆಗೆ] [Time : 10-00 A.M. to 1-15 P.M.

ಗರಿಷ್ಠ ಅಂಕಗಳು : 80] [Max. Marks : 80

ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :

1. ಈ ಪ್ರಶ್ನೆಪತ್ರಿಕೆಯು ಒಟ್ಟು 38 ಪ್ರಶ್ನೆಗಳನ್ನು ಹೊಂದಿದೆ.
2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ **ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ (ಬಾಣದ ಗುರುತನ್ನು ಅನುಸರಿಸಿ). ಎಡಬದಿ ಪಾರ್ಶ್ವವನ್ನು ಕತ್ತರಿಸಬೇಡಿ.** ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.
3. ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ಸೂಚಿಸುತ್ತವೆ.
5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.
6. ನಿಮಗೆ ವಿತರಿಸಲಾಗಿರುವ ಪ್ರಶ್ನೆಪತ್ರಿಕೆಯ ಆವೃತ್ತಿ (Version) ಮತ್ತು ನಿಮ್ಮ ಪ್ರವೇಶ ಪತ್ರದಲ್ಲಿ ಮುದ್ರಿತವಾಗಿರುವ ಪ್ರಶ್ನೆಪತ್ರಿಕೆಯ ಆವೃತ್ತಿ ಇವೆರಡೂ ಒಂದೇ ಆಗಿರುವುದನ್ನು ಖಾತರಿಪಡಿಸಿಕೊಳ್ಳಿ.

Cut here/ಇಲ್ಲಿ ಕತ್ತರಿಸಿ

July - Exam – 3 - 2025

TEAR HERE TO OPEN THE QUESTION PAPER WITH REVERSE JACKET
ಹಿಮ್ಮುಖ ಜಾಕೆಟ್ ಹೊಂದಿರುವ ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ

Tear here/ಇಲ್ಲಿ ಕತ್ತರಿಸಿ

Tear here/ಇಲ್ಲಿ ಕತ್ತರಿಸಿ

SAMPLE

85-K

I. ಈ ಪ್ರತಿಯೊಂದು ಪ್ರಶ್ನೆ ಅಥವಾ ಅಪೂರ್ಣ ಹೇಳಿಕೆಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಒಂದು ಉತ್ತರವನ್ನು ಆರಿಸಿ, ಅದರ ಕ್ರಮಾಕ್ಷರದೊಡನೆ ಪೂರ್ಣ ಉತ್ತರವನ್ನು ಬರೆಯಿರಿ : **8 × 1 = 8**

1. ಮೈಸೂರು ಸಿವಿಲ್ ಸರ್ವೀಸ್ ಪರೀಕ್ಷೆಯನ್ನು ಆರಂಭಿಸಿದ ಮೈಸೂರಿನ ದಿವಾನರು

(A) ಕೆ. ಶೇಷಾದ್ರಿ ಅಯ್ಯರ್

(B) ಸರ್ ಮಿರ್ಜಾ ಇಸ್ಮಾಯಿಲ್

(C) ರಂಗಾಚಾರ್ಲು

(D) ಸರ್ ಎಂ. ವಿಶ್ವೇಶ್ವರಯ್ಯ

2. ಸ್ವಾತಂತ್ರ್ಯಾನಂತರದ ಭಾರತದಲ್ಲಿ ಭಾಷೆಯ ಆಧಾರದ ಮೇಲೆ ರಚನೆಯಾದ ಮೊದಲ ರಾಜ್ಯ

(A) ಕರ್ನಾಟಕ

(B) ಆಂಧ್ರ ಪ್ರದೇಶ

(C) ಗೋವಾ

(D) ತಮಿಳುನಾಡು

3. ಅಂತಾರಾಷ್ಟ್ರೀಯ ನ್ಯಾಯಾಲಯದ ಪ್ರಧಾನ ಕಛೇರಿ ಇರುವ ಸ್ಥಳ

(A) ಪ್ಯಾರಿಸ್

(B) ನ್ಯೂಯಾರ್ಕ್

(C) ಹೇಗ್

(D) ರೋಮ್

4. ಸಮಾನ ವೇತನ ಕಾಯ್ದೆ ಜಾರಿಗೆ ಬಂದ ವರ್ಷ

(A) 1955

(B) 1961

(C) 1976

(D) 1986

5. ಗಂಗಾನದಿಯ ಮುಖಜಭೂಮಿಯಲ್ಲಿ ಕಂಡುಬರುವ ಅರಣ್ಯಗಳನ್ನು ಕರೆದಿರುವುದು

(A) ನಿತ್ಯಹರಿದ್ವರ್ಣ ಅರಣ್ಯ

(B) ಮರುಭೂಮಿ ಅರಣ್ಯ

(C) ಎಲೆ ಉದುರಿಸುವ ಮಾನ್ಸೂನ್ ಅರಣ್ಯ

(D) ಸುಂದರಬನ ಅರಣ್ಯ

6. ಜಗತ್ತಿನಲ್ಲೆ ಆರ್ಥಿಕ ಯೋಜನೆಗಳನ್ನು ಜಾರಿಗೊಳಿಸಿದ ಮೊದಲ ರಾಷ್ಟ್ರ

(A) ಭಾರತ

(B) ಅಮೆರಿಕಾ

(C) ಸೋವಿಯತ್ ರಷ್ಯಾ

(D) ಫ್ರಾನ್ಸ್

7. 20 ನೇ ಶತಮಾನದ ಅದ್ಭುತ ಲೋಹ

(A) ಚಿನ್ನ

(B) ಅಲ್ಯುಮಿನಿಯಂ

(C) ಬೆಳ್ಳಿ

(D) ತಾಮ್ರ

8. ಬ್ಯಾಂಕಿನಲ್ಲಿ ದಿನಕ್ಕೆ ಎಷ್ಟು ಬಾರಿಯಾದರೂ ವ್ಯವಹರಿಸಬಹುದಾದ ಬ್ಯಾಂಕ್ ಖಾತೆಯು

(A) ಉಳಿತಾಯ ಖಾತೆ

(B) ಚಾಲ್ತಿ ಖಾತೆ

(C) ಆವರ್ತ ಠೇವಣಿ ಖಾತೆ

(D) ನಿಶ್ಚಿತ ಠೇವಣಿ ಖಾತೆ

II. ಈ ಪ್ರತಿಯೊಂದು ಪ್ರಶ್ನೆಗೂ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ : **8 × 1 = 8**

9. ಭಾರತದಲ್ಲಿ ಪೋರ್ಚುಗೀಸ್ ಸಾಮ್ರಾಜ್ಯದ ನಿಜವಾದ ಸ್ಥಾಪಕ ಯಾರು ?

10. ದೊಂಬಿಗಳನ್ನು ಹೇಗೆ ನಿಯಂತ್ರಿಸಬಹುದು ?

11. ಮೊದಲನೇ ಮಹಾಯುದ್ಧಕ್ಕೆ ತತ್‌ಕ್ಷಣದ ಕಾರಣವೇನು ?

12. ವಿದೇಶಾಂಗ ನೀತಿ ಎಂದರೇನು ?

13. ಭಾರತದ ಅತ್ಯಂತ ಎತ್ತರವಾದ ಶಿಖರ ಯಾವುದು ?

14. ಹೆಣ್ಣು ಭ್ರೂಣಹತ್ಯೆ ಎಂದರೇನು ?

15. ಪ್ರತಿ ವರ್ಷ ಮಾರ್ಚ್ 15ನ್ನು 'ವಿಶ್ವ ಗ್ರಾಹಕರ ಹಕ್ಕುಗಳ ದಿನ' ಎಂದು ಏಕೆ ಆಚರಿಸಲಾಗುತ್ತದೆ ?



16. ಹಸಿರು ಕ್ರಾಂತಿ ಎಂದರೇನು ?

III. ಈ ಪ್ರತಿಯೊಂದು ಪ್ರಶ್ನೆಗೂ ಎರಡರಿಂದ ನಾಲ್ಕು ವಾಕ್ಯಗಳಲ್ಲಿ ಅಥವಾ ಅಂಶಗಳಲ್ಲಿ ಉತ್ತರಿಸಿ : **8 × 2 = 16**

17. ನಿಶ್ಯಸ್ತ್ರೀಕರಣವು ಪ್ರಚಲಿತ ಜಗತ್ತಿಗೆ ಅವಶ್ಯಕವಾಗಿದೆ. ವಿವರಿಸಿ.



ಅಥವಾ

ವಿಶ್ವ ಆರೋಗ್ಯ ಸಂಸ್ಥೆಯು ಮಾನವರ ಆರೋಗ್ಯ ಸುಧಾರಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತಿದೆ. ವಿವರಿಸಿ.

18. ಅಸಂಘಟಿತ ವಲಯದ ಕೆಲಸಗಾರರು ಎದುರಿಸುತ್ತಿರುವ ಸಮಸ್ಯೆಗಳಾವುವು ?

ಅಥವಾ

ಪರಿಸರ ಮಾಲಿನ್ಯಕ್ಕೆ ಕಾರಣಗಳಾವುವು ?



19. ಟರ್ಕರು ಕಾನ್‌ಸ್ಟಾಂಟಿನೋಪಲನ್ನು ವಶಪಡಿಸಿಕೊಂಡಿದ್ದು ಭಾರತಕ್ಕೆ ಹೊಸ ಜಲಮಾರ್ಗವನ್ನು ಕಂಡುಹಿಡಿಯಲು ಹೇಗೆ ಕಾರಣವಾಯಿತು ?



20. ಜುನಾಗಢ್ ಭಾರತದ ಒಕ್ಕೂಟಕ್ಕೆ ಹೇಗೆ ವಿಲೀನಗೊಂಡಿತು ?

21. ಖಾರಿಫ್ ಬೇಸಾಯವು ರಬಿ ಬೇಸಾಯಕ್ಕಿಂತ ಹೇಗೆ ಭಿನ್ನವಾಗಿದೆ ?

22. ಭಾರತದ ವಾಯುಗುಣದ ಮೇಲೆ ಪ್ರಭಾವಬೀರುವ ಅಂಶಗಳಾವುವು ?

23. ಪ್ರತ್ಯಕ್ಷ ತೆರಿಗೆ ಮತ್ತು ಪರೋಕ್ಷ ತೆರಿಗೆಗಳ ನಡುವಿನ ವ್ಯತ್ಯಾಸಗಳೇನು ?

24. ಗ್ರಾಹಕ ಸಂರಕ್ಷಣಾ ಕಾಯ್ದೆಯ ಮುಖ್ಯ ಉದ್ದೇಶಗಳನ್ನು ವಿವರಿಸಿ.



IV. ಈ ಪ್ರತಿಯೊಂದು ಪ್ರಶ್ನೆಗೂ ಆರು ವಾಕ್ಯಗಳಲ್ಲಿ ಅಥವಾ ಅಂಶಗಳಲ್ಲಿ ಉತ್ತರಿಸಿ : **9 × 3 = 27**

25. ಸಹಾಯಕ ಸೈನ್ಯ ಪದ್ಧತಿಯು ಭಾರತೀಯ ರಾಜರನ್ನು ನಿಯಂತ್ರಿಸಲು ಬ್ರಿಟಿಷರಿಗೆ ಹೇಗೆ ಸಹಾಯಕವಾಯಿತು ?

ಅಥವಾ

ದಯಾನಂದ ಸರಸ್ವತಿಯವರು ಭಾರತೀಯ ಸಮಾಜವನ್ನು ಸುಧಾರಿಸಲು ಹೇಗೆ ಪ್ರಯತ್ನಿಸಿದರು ?



26. ಉದ್ಯಮಿಗಳ ಗುಣಲಕ್ಷಣಗಳಾವುವು ?

ಅಥವಾ

ಅಂಚೆ ಕಛೇರಿಗಳು ನೀಡುವ ಬ್ಯಾಂಕಿಂಗ್ ಸೌಲಭ್ಯಗಳಾವುವು ?

27. ಮಣ್ಣಿನ ಸವೆತವನ್ನು ತಡೆಗಟ್ಟುವ ವಿಧಾನಗಳಾವುವು ?

ಅಥವಾ

ಅರಣ್ಯಗಳ ಉಪಯೋಗಗಳಾವುವು ?

28. ಗ್ರಾಮೀಣ ಅಭಿವೃದ್ಧಿಯ ಮಹತ್ವವನ್ನು ವಿವರಿಸಿ.

ಅಥವಾ

ಸಾರ್ವಜನಿಕ ಹಣಕಾಸಿನ ಮಹತ್ವವನ್ನು ವಿವರಿಸಿ.

29. ಚಿಕ್ಕ ದೇವರಾಜ ಒಡೆಯರ್‌ರವರ ಸಾಧನೆಗಳನ್ನು ವಿವರಿಸಿ.

30. ಜವಾಹರಲಾಲ್ ನೆಹರೂರವರು 'ನವಭಾರತದ ಶಿಲ್ಪಿ' ಎಂದು ಗುರುತಿಸಲ್ಪಟ್ಟಿದ್ದಾರೆ. ಸಮರ್ಥಿಸಿ.

31. ಸಾರ್ವಜನಿಕ ಆಡಳಿತದ ಪ್ರಾಮುಖ್ಯತೆ ಹೆಚ್ಚುತ್ತಿದೆ. ಏಕೆ ?

32. ಇತ್ತೀಚಿನ ದಿನಗಳಲ್ಲಿ ಅಸ್ಪೃಶ್ಯತೆಯ ಆಚರಣೆ ಕಡಿಮೆಯಾಗುತ್ತಿದೆ. ಏಕೆ ?

33. ಕೈಗಾರಿಕೆಗಳು ಕೆಲವು ಪ್ರದೇಶಗಳಲ್ಲಿ ಮಾತ್ರ ಕೇಂದ್ರೀಕೃತವಾಗಿರುತ್ತವೆ. ಏಕೆ ?

V. ಈ ಪ್ರತಿಯೊಂದು ಪ್ರಶ್ನೆಗೂ ಎಂಟು ವಾಕ್ಯಗಳಲ್ಲಿ ಅಥವಾ ಅಂಶಗಳಲ್ಲಿ ಉತ್ತರಿಸಿ :

4 × 4 = 16

34. ಭಾರತದಲ್ಲಿ ಬ್ರಿಟಿಷ್ ಶಿಕ್ಷಣದಿಂದಾದ ಪರಿಣಾಮಗಳನ್ನು ವಿವರಿಸಿ.

ಅಥವಾ

ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಮಂದಗಾಮಿಗಳ ಪಾತ್ರವನ್ನು ವಿವರಿಸಿ.

35. 1857 ರ ದಂಗೆಯು ವಿಫಲವಾಗಲು ಕಾರಣಗಳೇನು ?

36. ಇತ್ತೀಚಿನ ದಿನಗಳಲ್ಲಿ ಭಾರತದಲ್ಲಿ ಮಹಿಳೆಯರ ಸ್ಥಾನಮಾನ ಸುಧಾರಿಸುತ್ತಿದೆ. ಏಕೆ ?

37. ಭೂಕಂಪನದಿಂದ ಉಂಟಾಗುವ ಪರಿಣಾಮಗಳನ್ನು ಎದುರಿಸಲು ತೆಗೆದುಕೊಳ್ಳಬಹುದಾದ ಮುನ್ನೆಚ್ಚರಿಕೆಯ ಕ್ರಮಗಳನ್ನು ವಿವರಿಸಿ.

VI. 38. **ನಿಮಗೆ ನೀಡಿರುವ ಭಾರತದ ನಕ್ಷೆಯಲ್ಲಿ ಈ ಕೆಳಗಿನ ಯಾವುದಾದರೂ ಐದನ್ನು ಗುರುತಿಸಿ :** **5 × 1 = 5**

a) $23^{\circ}30^{/}$ ಉತ್ತರ ಅಕ್ಷಾಂಶ

b) ಹಿರಾಕುಡ್ ಯೋಜನೆ

c) ಇಂದಿರಾ ಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ

d) ಬಾಂಬೆ ಹೈ

e) ನರ್ಮದಾ ನದಿ

f) ಪಶ್ಚಿಮ ಘಟ್ಟಗಳು

g) ಶ್ರೀನಗರ

ದೃಷ್ಟಿ ವಿಕಲಚೇತನ ವಿದ್ಯಾರ್ಥಿಗಳಿಗೆ ಪರ್ಯಾಯ ಪ್ರಶ್ನೆ : (ಪ್ರಶ್ನೆ ಸಂಖ್ಯೆ 38 ರ ಬದಲಿಗೆ)

ವಿವಿಧೋದ್ದೇಶ ನದಿ ಕಣಿವೆ ಯೋಜನೆಗಳ ಮುಖ್ಯ ಉದ್ದೇಶಗಳನ್ನು ತಿಳಿಸಿ. **5**

85-K

DO NOT WRITE ANYTHING HERE